# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## ಅಧಿಸೂಚನೆ

**ಸಂಖ್ಯೆ: ಕವಿಪ್ರನಿನಿ/ಬಿ16/3281/2014-15** **ದಿನಾಂಕ: 17.07.2015**

ದಿನಾಂಕ: 12.06.2015 ರ ಉದ್ಯೋಗ ಪ್ರಕಟಣೆಯಲ್ಲಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ಕಿರಿಯ ಸ್ಟೇಷನ್ ಪರಿಚಾರಕ (JSA) ಹುದ್ದೆಗಳನ್ನು ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಿರಿಯ ಮಾರ್ಗದಾಳು (JLM) ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ರಾಜ್ಯದ ವಿದ್ಯಾಸಂಸ್ಥೆಗಳಿಂದ ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ 'ಆನ್-ಲೈನ್' (ON-LINE) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು ಹಾಗೂ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಯಾವುದಾದರೂ ಒಂದು ಕಂಪನಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ ಎಂದು ತಿಳಿಸಲಾಗಿತ್ತು.

ಆದಾಗ್ಯೂ, ಅಭ್ಯರ್ಥಿಗಳು ಉದ್ಯೋಗ ಪ್ರಕಟಣೆಯಲ್ಲಿ ತಿಳಿಸಲಾಗಿದ್ದ ಸೂಚನೆಗಳನ್ನು ಪಾಲಿಸದೆ ಒಂದಕ್ಕಿಂತ ಹೆಚ್ಚು ಕಂಪನಿಗಳಿಗೆ ಅರ್ಜಿಗಳನ್ನು ಸಲ್ಲಿಸಿರುವುದು ಕಂಡುಬಂದಿರುತ್ತದೆ. ಆದ್ದರಿಂದ ಒಂದಕ್ಕಿತ ಹೆಚ್ಚು ಕಂಪನಿಗಳಿಗೆ ಅರ್ಜಿಗಳನ್ನು ಸಲ್ಲಿಸಿರುವ ಅಭ್ಯರ್ಥಿಗಳು ತಮಗೆ ಅನುಕೂಲವಾದ ಯಾವುದಾದರೂ ಒಂದು ಕಂಪನಿಯನ್ನು ಮಾತ್ರ ಆಯ್ಕೆ ಮಾಡಿಕೊಳ್ಳಲು ಅವಕಾಶವನ್ನು ಕಲ್ಪಿಸಲು ಉದ್ದೇಶಿಸಲಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು, ದಿನಾಂಕ: **20.07.2015 ರಿಂದ 22.07.2015 ರವರೆಗೆ** ಸಂಬಂಧಿಸಿದ ವೆಬ್‌ಸೈಟ್‌ಗಳಿಗೆ ಲಾಗ್-ಆನ್ ಆಗಿ ಈಗಾಗಲೇ ಸಲ್ಲಿಸಿರುವ ಅರ್ಜಿಗಳಲ್ಲಿ ತಾವು ಇಚ್ಛಿಸುವ ಯಾವುದಾದರೂ ಒಂದು ಕಂಪನಿಗೆ ಸಲ್ಲಿಸಿರುವ ಅರ್ಜಿಯನ್ನು ಮಾತ್ರ ಆಯ್ಕೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಒಂದು ವೇಳೆ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಪರಿಗಣಿಸಬೇಕಾದ ಅರ್ಜಿಯನ್ನು ಆಯ್ಕೆ ಮಾಡಿಕೊಳ್ಳದಿದ್ದ ಪಕ್ಷದಲ್ಲಿ, ಅಭ್ಯರ್ಥಿಗಳು ಪ್ರಥಮವಾಗಿ ಯಾವ ಕಂಪನಿಗೆ ಅರ್ಜಿಯನ್ನು ಸಲ್ಲಿಸಿರುತ್ತಾರೋ, ಆ ಅರ್ಜಿಯನ್ನು ಮಾತ್ರ ನೇಮಕಾತಿಗಾಗಿ ಪರಿಗಣಿಸಲಾಗುವುದು. ಉಳಿದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಕಂಪನಿಯ ಈ ಕೆಳಕಂಡ ಸಹಾಯವಾಣಿಯನ್ನು ಸಂಪರ್ಕಿಸಬಹುದಾಗಿದೆ.

| | | | |
|---|---|---|---|
| ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ | : | 080-22211527 EXT: 270 | www.kptcl.com |
| ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ | : | 080-22085061 | www.bescom.org, |
| ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ | : | 08472-256782 | www.gescom.in, |
| ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ | : | 0824-2441432 | www.mesco.in |
| ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ | : | 0836-2223867 | www.hescom.co.in |
| ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ | : | 0821-2343384 | www.cescmysore.org |

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ನಿಗಮ ಕಾರ್ಯಾಲಯ, ಕವಿಪ್ರನಿನಿ,
ಕಾವೇರಿ ಭವನ, ಬೆಂಗಳೂರು.